# ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಶಾಹಾಪೂರ

## ಸಿ.ಸಿ ನಂಃ 672/ 2020

| | | |
|---|---|---|
| ಸಾಕ್ಷಿಯ ಹೆಸರುಃ | ಜಾಫರಸಾಬ | ಪ್ರಾಸಾಃ 04 |
| ತಂದೆ/ಗಂಡನ ಹೆಸರುಃ | ಮಹ್ಮದ ಹುಸೇನಸಾಬ | ಚಾಸಾಃ 05 |
| ವಯಸ್ಸುಃ | 30 ವರ್ಷ | ದಿಃ 23-01-2024 |
| ಉದ್ಯೋಗಃ | ಕೂಲಿ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಗೋಗಿ | |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :**

ಚಾಸಾ 4 ಮತ್ತು ಆರೋಪಿಯ ಪರಿಚಯ ಇರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಪಂಚನಾಮೆಯನ್ನು ಮಾಡಿರುವುದಿಲ್ಲ. ಘಟನೆಯ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಪೋಲಿಸರ ಹೇಳಿಕೆಯ ಮೇರೆಗೆ ನಾನು ಸಹಿಯನ್ನು ಮಾಡಿರುತ್ತೇನೆ. ಸದರಿ ಪಂಚನಾಮೆಯಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

**(ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರ ಮುಂದೆ ನೀಡಿದ ಹೇಳಿಕೆಗೆ ವಿರೋದಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸಹಾಯಕ ಸರಕಾರಿ ಅಭಿಯೋಜಕರು ಭಿನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾಗ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗೊಂಡು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು : ಮಾನ್ಯ ಸ.ಸ.ಅ. ರವರಿಂದಃ**

ದಿಃ 22.4.2020 ರಂದು ಬೆಃ 9.00 ರಿಂದ 9.30 ಗಂಟೆಯವರೆಗೆ ಪೋಲಿಸರು ನನ್ನ ಸಮಕ್ಷಮ ಜಪ್ತಿ ಪಂಚನಾಮೆಯನ್ನು ಮಾಡಿ ಟ್ರಾಕ್ಟರ ನಂ. ಕೆಎ-33-ಟಿಎ-9848 ನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-4 ರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು   ಆರೋಪಿತರ ಪರಃ  ಶ್ರೀ ವಿ.ಆರ್.ಡಿ. ವಕೀಲರವರಿಂದಃ</u>**

ಯಾವುದೇ ಪಾಟೀ ಸವಾಲು ಇರುವುದಿಲ್ಲ.

**ಮರುವಿಚಾರಣೆ : ಇರುವುದಿಲ್ಲ.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ  ಜೆಎಂಎಫ್‌ಸಿ ನ್ಯಾಯಾಧೀಶರು**
**ಶಾಹಾಪೂರ**